ಸಂಖ್ಯೆ: ಕೆಎಟಿ/ಸಿಬ್ಬಂದಿ(1)/ಕಂಪ್ಯೂ-ಲಿಟ್-ಟೆಸ್ಟ್/31/2012

ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ,
ಕಂದಾಯ ಭವನ, 6 ಮತ್ತು 7ನೇ ಮಹಡಿ,
ಕೆ.ಜಿ.ರಸ್ತೆ, ಬೆಂಗಳೂರು, ದಿನಾಂಕ: 22.01.2018.

# ಟಿಪ್ಪಣಿ

ವಿಷಯ: ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಅಕ್ರಮವೆಸಗಿದ ನೌಕರರ ಮೇಲೆ ಶಿಸ್ತುಕ್ರಮ ಕೈಗೊಳ್ಳುವ ಬಗೆಗಿನ ಸರ್ಕಾರದ ಸುತ್ತೋಲೆಯನ್ನು ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಜಾಲತಾಣ (Website) ದಲ್ಲಿ ಪ್ರಕಟಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ಸರ್ಕಾರದ ಸುತ್ತೋಲೆ ಸಂಖ್ಯೆ:ಸಿಆಸುಇ 24 ಸೇವನೆ 2017, ದಿನಾಂಕ: 03.01.2018.

* * * * *

ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಅಕ್ರಮವೆಸಗಿದ ನೌಕರರ ಮೇಲೆ ಶಿಸ್ತುಕ್ರಮ ಕೈಗೊಳ್ಳುವ ಬಗ್ಗೆ ಕರ್ನಾಟಕ ಸರ್ಕಾರವು ಹೊರಡಿಸಿರುವ ಉಲ್ಲೇಖಿತ ಸುತ್ತೋಲೆಯನ್ನು ಇದರೊಂದಿಗೆ ಲಗತ್ತಿಸುತ್ತಾ, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿಯ ಎಲ್ಲಾ ನೌಕರರ ಮಾಹಿತಿಗಾಗಿ ನ್ಯಾಯಮಂಡಳಿಯ ಅಧಿಕೃತ ಜಾಲತಾಣ (Website) ದಲ್ಲಿ ಪ್ರಕಟಿಸಲು ಈ ಮೂಲಕ ಸೂಚಿಸಲಾಗಿದೆ.

'ಸನ್ಮಾನ್ಯ ಅಧ್ಯಕ್ಷರ ಆದೇಶದ ಮೇರೆಗೆ'

22/1/2018

ವಿಲೇಖನಾಧಿಕಾರಿ,
ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ,
ಬೆಂಗಳೂರು.

ಗೆ,

ಗಣಕ ನಿರ್ವಾಹಕರು,
ಕಂಪ್ಯೂಟರ್/ವೆಬ್‌ಸೈಟ್ ಶಾಖೆ,
ಕ.ರಾ.ಆ.ನ್ಯಾ., ಬೆಂಗಳೂರು.

*ಎಂಆರ್

## ಕರ್ನಾಟಕ ಸರ್ಕಾರ

ಸಂಖ್ಯೆ: ಸಿಆಸುಇ 24 ಸೇವನೆ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಧಾನಸೌಧ
ಬೆಂಗಳೂರು, ದಿನಾಂಕ: 03.01.2018.

### ಸುತ್ತೋಲೆ

ವಿಷಯ: ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯಲ್ಲಿ ಅಕ್ರಮವೆಸಗಿದ ನೌಕರರ ಮೇಲೆ ಶಿಸ್ತುಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ: ಅಧಿಸೂಚನೆ ಸಂಖ್ಯೆ: ಸಿಆಸುಇ 43 ಸೇವನೆ 2008 ದಿನಾಂಕ: 07.03.2012

****

ಕರ್ನಾಟಕ ಸಿವಿಲ್ ಸೇವಾ (ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ) ನಿಯಮಗಳು, 2012 ರನ್ವಯ ಕೆಲವೊಂದು ಹುದ್ದೆಗಳನ್ನು ಹೊರತುಪಡಿಸಿ ಉಳಿದ ನೌಕರರು/ಅಧಿಕಾರಿಗಳು ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆ ಪಾಸು ಮಾಡುವುದು ಕಡ್ಡಾಯವಾಗಿರುತ್ತದೆ.

ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ನ್ಯಾಯೋಚಿತ ರೀತಿಯಲ್ಲಿ ನಡೆಸಲು ಅನುವಾಗುವಂತೆ ಸರ್ಕಾರವು ಕೆಲವು ಸೂಚನೆಗಳನ್ನು ನೀಡುವುದು ಅವಶ್ಯವಾಗಿರುತ್ತದೆ. ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ತೆಗೆದುಕೊಂಡ ಸರ್ಕಾರಿ ನೌಕರನ ಬದಲಾಗಿ ಬೇರೊಬ್ಬರು ಪರೀಕ್ಷೆ ಬರೆದಲ್ಲಿ ಅದನ್ನು ಕ್ರಿಮಿನಲ್ ಅಪರಾಧವೆಂದು ಪರಿಗಣಿಸಿ ಅಂತಹ ವ್ಯಕ್ತಿಯನ್ನು ಭಾರತೀಯ ದಂಡ ಸಂಹಿತೆ, 1860ರ ಸೆಕ್ಷನ್ 419ರ ಪರಿಣಾಮಗಳಿಗೆ ಒಳಪಡಿಸುವುದಲ್ಲದೆ, ಇಂತಹ ವಂಚನೆ ಎಸಗಲು ಕಾರಣನಾದ ಸರ್ಕಾರಿ ನೌಕರನ ವಿರುದ್ಧವೂ ಭಾರತೀಯ ದಂಡ ಸಂಹಿತೆ, 1860ರ ಸೆಕ್ಷನ್ 417ರಡಿ ಕ್ರಮ ಕೈಗೊಳ್ಳಬೇಕಾಗುತ್ತದೆ ಹಾಗೂ ಕರ್ನಾಟಕ ಸಿವಿಲ್ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರಡಿ ಶಿಸ್ತು ಕ್ರಮಕ್ಕೆ ಒಳಪಡಿಸಬೇಕಾಗುತ್ತದೆ. ಎಲ್ಲಾ ಸಕ್ಷಮ ಪ್ರಾಧಿಕಾರಗಳು ಅಕ್ರಮವೆಸಗಿದ ನೌಕರರ ವಿರುದ್ಧ ಕಟ್ಟುನಿಟ್ಟಾಗಿ ಕ್ರಮವಹಿಸುವಂತೆ ಸೂಚಿಸಲಾಗಿದೆ.

12/01/2018
S.O (EH)
12/01/18

Gayathri. M.R
03/01/2018

(ಗಾಯತ್ರಿ ಎಂ.ಆರ್.)
ಸರ್ಕಾರದ ಅಧೀನ ಕಾರ್ಯದರ್ಶಿ
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಸೇವಾ ನಿಯಮಗಳು-1)

F R NO. 277/18
19/01/18.

**ಇವರಿಗೆ,**

ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ ಇವರಿಗೆ–ಇದನ್ನು ರಾಜ್ಯಪತ್ರದಲ್ಲಿ ಪ್ರಕಟಿಸಿ ಅದರ 100 ಪ್ರತಿಗಳನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಸೇವಾ ನಿಯಮಗಳು–1, ಕೊಠಡಿ ಸಂಖ್ಯೆ: 31, ವಿಧಾನಸೌಧ, ಬೆಂಗಳೂರು ಇವರಿಗೆ ಕಳುಹಿಸಿಕೊಡಲು ಕೋರಿದೆ.

2...

ಪ್ರತಿ:

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ)/(ಇ&ಆರ್‌ಎಸ್-ಎ)/(ಎ&ಇ).
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು.
5. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು.
6. ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳು.
7. ರಾಜ್ಯಪಾಲರ ವಿಶೇಷ ಕಾರ್ಯದರ್ಶಿಯವರು.
8. ಎಲ್ಲಾ ಇಲಾಖಾ ಮುಖ್ಯಸ್ಥರು/ಎಲ್ಲಾ ಜಿಲ್ಲಾಧಿಕಾರಿಗಳು/ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
9. *ಮಹಾ ನಿಬಂಧಕರು, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
10. *ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
11. *ನಿಬಂಧಕರು, ಕರ್ನಾಟಕ ರಾಜ್ಯ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು.
12. *ಕಾರ್ಯದರ್ಶಿ, ಕರ್ನಾಟಕ ಲೋಕಸೇವಾ ಆಯೋಗ, ಬೆಂಗಳೂರು.
13. *ಕಾರ್ಯದರ್ಶಿ, ಕರ್ನಾಟಕ ವಿಧಾನ ಸಭೆ/ಪರಿಷತ್ತು, ಬೆಂಗಳೂರು.
14. ಎಲ್ಲಾ ಸಚಿವರ/ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿಗಳು
15. ಅಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಬೆಂಗಳೂರು.
16. ಸರ್ಕಾರದ ಎಲ್ಲಾ ವಿಶೇಷ/ಅಪರ/ಜಂಟಿ/ಉಪ/ಅಧೀನ ಕಾರ್ಯದರ್ಶಿಗಳು
17. ಸಚಿವಾಲಯದ ಎಲ್ಲಾ ಶಾಖೆಗಳು
18. ಸಚಿವ ಸಂಪುಟ ಶಾಖೆ
19. ಪತ್ರಿಕಾ ಪ್ರಕಟಣೆ
20. ವಾರದ ರಾಜ್ಯಪತ್ರ.
21. ಶಾಖಾ ರಕ್ಷಾ ಕಡತ/ಬಿಡಿ ಪ್ರತಿಗಳು.

(*ಮುಖಪತ್ರದೊಂದಿಗೆ)